## DECEMBER 31, 2025
## ALL INDIA RADIO- DHARWAD
## PRADESH SAMACHARA (KANNADA) 7:05 AM

- **ಹೊಸ ವರ್ಷದ ಸಂಭ್ರಮಾಚರಣೆ ಸಂದರ್ಭದಲ್ಲಿ ಸುರಕ್ಷತೆ ಸರ್ಕಾರದ ಆದ್ಯತೆ: ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆಯಿಂದ ಅಗತ್ಯ ಸಿದ್ಧತೆ.**

- **ಶಿಶುಗಳ ಅಪೌಷ್ಟಿಕತೆ ತಡೆಯಲು ರಾಜ್ಯದ ಪ್ರತಿ ಜಿಲ್ಲಾಸ್ಪತ್ರೆಗಳಲ್ಲಿ 'ತಾಯಿ ಎದೆ ಹಾಲಿನ ಬ್ಯಾಂಕ್' ಸ್ಥಾಪನೆ–ಆರೋಗ್ಯ ಸಚಿವರಿಂದ ಮಾಹಿತಿ.**

- **ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ, ರಾಜ್ಯದಲ್ಲಿ ಹೆಸರುಕಾಳು ಖರೀದಿ ಅವಧಿ ವಿಸ್ತರಿಸಿದ ಕೇಂದ್ರ ಸರ್ಕಾರ.**

- **ಪ್ರಸಕ್ತ ಸಾಲಿನ ಪಂ.ಮಲ್ಲಿಕಾರ್ಜುನ ಮನ್ಸೂರ ರಾಷ್ಟ್ರೀಯ ಪ್ರಶಸ್ತಿಗೆ ಪುಣೆಯ ವಿದುಷಿ ಅಲಕಾದೇವ ಮಾರುಲ್ಕರ ಭಾಜನ: ಇಂದು ಸಂಜೆ ಪ್ರಶಸ್ತಿ ಪ್ರದಾನ.**

**ಈಗ ವಾರ್ತೆಗಳ ವಿವರ**

*******

**ಹೊಸ ವರ್ಷದ ಸಂಭ್ರಮಾಚರಣೆಯ ಸಂದರ್ಭದಲ್ಲಿ ಸುರಕ್ಷತೆ ಸರ್ಕಾರದ ಆದ್ಯತೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಸಂದೇಶ ನೀಡಿರುವ ಅವರು, ಯಾವುದೇ ಅಹಿತಕರ ಘಟನೆಗಳು ನಡೆಯದಂತೆ, ಜೀವಹಾನಿಯಾಗದಂತೆ ಸಡಗರದಿಂದ ಹೊಸ ವರ್ಷವನ್ನು ಸ್ವಾಗತಿಸಲು ಬೆಂಗಳೂರನ್ನು ಸಜ್ಜುಗೊಳಿಸಲಾಗುತ್ತಿದೆ. ಸಂಭ್ರಮಾಚರಣೆಯ ಸಂದರ್ಭದಲ್ಲಿ ಪೊಲೀಸರು ನೀಡುವ ಸಲಹೆ, ಸೂಚನೆಗಳನ್ನು ತಪ್ಪದೇ ಪಾಲಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮನವಿ ಮಾಡಿದ್ದಾರೆ.**

**ಧ್ವನಿ–ಸಿದ್ದರಾಮಯ್ಯ –43 ಸೆಕೆಂಡ್ಸ್**

*******

ಹೊಸ ವರ್ಷಾಚರಣೆ ಸಂದರ್ಭದಲ್ಲಿ ಚಿಕ್ಕಮಗಳೂರು ಜಿಲ್ಲೆಯ ಹಲವು ಪ್ರವಾಸಿ ತಾಣಗಳಿಗೆ ಪ್ರವಾಸಿಗರು ಭೇಟಿ ನೀಡುವುದನ್ನು ಜಿಲ್ಲಾಧಿಕಾರಿ ಮೀನಾ ನಾಗರಾಜ್ ನಿಷೇಧಿಸಿ ಆದೇಶ ಹೊರಡಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಕಾನೂನು ಸುವ್ಯವಸ್ಥೆ ದೃಷ್ಟಿಯಿಂದ ಜಿಲ್ಲೆಯ ಮುಳ್ಳಯ್ಯನಗಿರಿ, ಕೆಮ್ಮಣ್ಣುಗುಂಡಿ, ಗಾಳಿಕೆರೆ, ಹಿರೇಕೊಳಲೆ ಕೆರೆ, ಎತ್ತಿನಭುಜ, ಬಂಡಾಜೆ ಫಾಲ್ಸ್, ಅಯ್ಯನಕೆರೆ ಸೇರಿ ವಿವಿಧ ತಾಣಗಳಿಗೆ ಡಿಸಂಬರ್ 31 ರ ಸಂಜೆ 6 ಗಂಟೆಯಿಂದ ಜನವರಿ 1 ರ ಬೆಳಗ್ಗೆ 6 ಗಂಟೆವರಗೆ ತಾತ್ಕಾಲಿಕ ನಿಷೇದ ವಿಧಿಸಲಾಗಿದೆ ಎಂದು ತಿಳಿಸಿದ್ದಾರೆ.

*******

ಹೊಸ ವ ರ್ಷದ ಆಚರಣೆ ಹಿನ್ನೆಲೆಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ವಿಶ್ವವಿಖ್ಯಾತ ನಂದಿಗಿರಿಧಾಮದಲ್ಲಿ ಮುಂಗಡವಾಗಿ ಕೊಠಡಿಗಳನ್ನು ಕಾಯ್ದಿರಿಸುವವರನ್ನು ಹೊರತುಪಡಿಸಿ ಉಳಿದ ಸಾರ್ವಜನಿಕರು ಮತ್ತು ಪ್ರವಾಸಿಗರಿಗೆ ಇಂದು ಮಧ್ಯಾಹ್ನ 2 ಗಂಟೆಯಿಂದ ಜನವರಿ 1 ರ ಬೆಳಗ್ಗೆ 10 ಗಂಟೆಯವರೆಗೆ ಪ್ರವೇಶ ನಿ ಷೇಧಿಸಿ ಜಿಲ್ಲಾಡಳಿತ ಆದೇಶ ಹೊರಡಿಸಿದೆ. 1 ರ ಬೆಳಗ್ಗೆ 10 ಗಂಟೆಯ ನಂತರ ಗಿರಿಧಾಮಕ್ಕೆ ಸಾರ್ವಜನಿಕರ ಪ್ರವೇಶ ಎಂದಿನಂತೆ ಇರುತ್ತದೆ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ.

*******

ಹೊಸ ವ ರ್ಷದ ಆಚರಣೆ ಹಿನ್ನೆಲೆ, ಹುಬ್ಬಳ್ಳಿ ಧಾರವಾಡ ಅವಳಿನಗರದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಅಗತ್ಯ ಕ್ರಮಗಳನ್ನು ಕೈಗೊಂಡಿದೆ. ಇಲಾಖೆ ತನ್ನ ವ್ಯಾಪ್ತಿಯಲ್ಲಿ 25 ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಿದ್ದು, ಕೆಎಸ್‌ಆರ್‌ಪಿ ಸೇರಿದಂತೆ ಸುಮಾರು 1,500 ಸಿಬ್ಬಂದಿ ನಿಯೋಜಿಸಿದೆ ಎಂದು ಹುಬ್ಬಳ್ಳಿ ಧಾರವಾಡ ಪೊಲೀಸ್ ಆಯುಕ್ತ ಎನ್ ಶಶಿಕುಮಾರ ಮಾಹಿತಿ ನೀಡಿದ್ದಾರೆ.

*******

ಹೊಸ ವ ರ್ಷಾಚರಣೆಗೆ ಕೊಡಗು ಜಿಲ್ಲೆಯಲ್ಲಿ ಸಂಭ್ರಮದ ಸಿದ್ಧತೆ ನಡೆಯುತ್ತಿರುವಾಗಲೇ ಮಾದಕ ದ್ರವ್ಯ ಮಾರಾಟ ಮಾಡಲು ಮುಂದಾಗಿದ್ದ ವ್ಯಕ್ತಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಸೋಮವಾರಪೇಟೆ ವ್ಯಾಪ್ತಿಯಲ್ಲಿ ಹೊಸ ವ ರ್ಷಾಚರಣೆ ಹೆಸರಲ್ಲಿ ರೇವ್ ಪಾರ್ಟಿ ಆಯೋಜನೆ ಮಾಡಲು ಸಿದ್ಧತೆ ನಡೆಸಿತ್ತು. ಈ ಕುರಿತು ಖಚಿತ ಮಾಹಿತಿ ಆಧರಿಸಿ ಇಬ್ಬರು ಡ್ರಗ್ ಪೆಡ್ಲರ್‌ಗಳನ್ನು ವಶಕ್ಕೆ ಪಡೆದು ಕಾನೂನು ಕ್ರಮ ಕೈಗೊಳ್ಳಲಾಗಿದೆ ಎಂದು ಕೊಡಗು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ. ರಾಮರಾಜನ್ ಮಾಹಿತಿ ನೀಡಿದ್ದಾರೆ. ಈಗಾಗಲೇ ಕೊಡಗು ಜಿಲ್ಲೆಯ ವಿವಿಧೆಡೆ ಶಂಕಿತ 50 ಮಂದಿಯನ್ನು ವಶಕ್ಕೆ ಪಡೆದು ಡ್ರಗ್ ಸೇವನೆ ಕುರಿತು ಪರಿಶೀಲನೆ ನಡೆಸಲಾಗಿದೆ. ಮಾದಕ ವಸ್ತು ಸೇವನೆ, ಮಾರಾಟ, ಬಳಕೆ ಕುರಿತು ಹದ್ದಿನ ಕಣ್ಣಿಡಲಾಗಿದೆ. ಹೊಸ ವ ರ್ಷಾಚರಣೆ ನೆಪದಲ್ಲಿ ಸಾರ್ವಜನಿಕರಿಗೆ ತೊಂದರೆಯಾದಲ್ಲಿ 112 ತುರ್ತು ಸಂಖ್ಯೆಗೆ ಕರೆ ಮಾಡುವಂತೆ ಎಸ್.ಪಿ. ರಾಮರಾಜನ್ ತಿಳಿಸಿದ್ದಾರೆ.

*******

ಶಿಶುಗಳ ಅಪೌಷ್ಟಿಕತೆ ಹೋಗಲಾಡಿಸಲು ರಾಜ್ಯದ ಪ್ರತಿ ಜಿಲ್ಲಾಸ್ಪತ್ರೆಗಳಲ್ಲಿ 'ತಾಯಿ ಎದೆ ಹಾಲಿನ ಬ್ಯಾಂಕ್'ಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಪ್ರಸ್ತುತ 12 ಬ್ಯಾಂಕ್‌ಗಳು ಕಾರ್ಯನಿರ್ವಹಿಸುತ್ತಿದ್ದು, ಎಂಟು ತಿಂಗಳಲ್ಲೇ ಸುಮಾರು 3,800 ಶಿಶುಗಳು ಇದರ ಪ್ರಯೋಜನ ಪಡೆದಿವೆ. ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಇನ್ನು ಹೆಚ್ಚುವರಿಯಾಗಿ 8 ಹೊಸ ಘಟಕಗಳನ್ನು ಸ್ಥಾಪಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಸಾಮಾಜಿಕ ಮಾಧ್ಯಮದ ಮೂಲಕ ಮಾಹಿತಿ ನೀಡಿದ್ದಾರೆ.

*******

ರಾಜ್ಯದಲ್ಲಿ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳು ಇಡೀ ದೇಶಕ್ಕೆ ಮಾದರಿಯಾಗಿವೆ ಎಂದು ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ. ಬೀದರನಲ್ಲಿ ಆಯೋಜಿಸಿದ್ದ "ಗ್ಯಾರಂಟಿ ಕಾರ್ಯಾಗಾರ–ಗ್ಯಾರಂಟಿ ಉತ್ಸವ"ದಲ್ಲಿ ಪಾಲ್ಗೊಂಡು ಪಂಚ ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನು ‌ಷ್ಠಾನ ಕುರಿತು ಮಾತನಾಡಿದ ಅವರು, ಈ ಯೋಜನೆಗಳು ಬಡವರು, ಮಹಿಳೆಯರು, ಕಾರ್ಮಿಕರು ಹಾಗೂ ಯುವಕರ ಬದುಕಿಗೆ ನಿಜವಾದ ಭರವಸೆಯಾಗಿವೆ. ಇವು ಘೋ ‌ಷಣೆಗಳಲ್ಲ, ಜನರ ಜೀವನದಲ್ಲಿ ಬದಲಾವಣೆ ತರುವ ಕಾರ್ಯಗಳಾಗಿವೆ ಎಂದರು.

*******

ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರ ಮನವಿ ಮೇರೆಗೆ, ಬೆಂಬಲ ಬೆಲೆ ಯೋಜನೆಯಡಿ, ರಾಜ್ಯದಲ್ಲಿ ಹೆಸರುಕಾಳು ಖರೀದಿ ಅವಧಿಯನ್ನು ಕೇಂದ್ರ ಸರ್ಕಾರ ವಿಸ್ತರಿಸಿದೆ. ರಾಜ್ಯದಲ್ಲಿ ಬೆಂಬಲ ಬೆಲೆಯಲ್ಲಿ ಹೆಸರುಕಾಳು ಖರೀದಿಗೆ ಕಾಲಾವಕಾಶ ವಿಸ್ತರಣೆಯ ಬಗ್ಗೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌವ್ಹಾಣ್, ಸಚಿವ ಪ್ರಲ್ಹಾದ ಜೋಶಿ ಅವರಿಗೆ ಪತ್ರ ಬರೆದು ಮಾಹಿತಿ ಹಂಚಿಕೊಂಡಿದ್ದಾರೆ. ಕರ್ನಾಟಕದಲ್ಲಿ 2025–26ರ ಮುಂಗಾರು ಹಂಗಾಮಿನಲ್ಲಿ ಬೆಳೆದ ಹೆಸರುಕಾಳು ಖರೀದಿಗೆ ಬೆಂಬಲ ಬೆಲೆ ಯೋಜನೆಯಡಿ ಮತ್ತ ‌ಷ್ಟು ಸಮಯ ಹೆಚ್ಚಿಸುವಂತೆ ಪ್ರಲ್ಹಾದ್ ಜೋಶಿ ಕೇಂದ್ರ ಕೃಷಿ ಸಚಿವರ ಗಮನ ಸೆಳೆದಿದ್ದರು. ರಾಜ್ಯದ ರೈತರ ಹಿತ ಕಾಪಾಡಲು ಪ್ರಧಾನಿ ನರೇಂದ್ರ ಮೋದಿ ಅವರು ನಿರಂತರವಾಗಿ ಸ್ಪಂದಿಸುತ್ತಿದ್ದಾರೆ. ರಾಜ್ಯ ಸರ್ಕಾರ ರೈತರಿಗೆ ವಿಸ್ತರಣೆಯ ಲಾಭ ತಲುಪಿಸಲು ಮುಂದಾಗಬೇಕು ಎಂದು ಪ್ರಲ್ಹಾದ ಜೋಶಿ ಹೇಳಿದ್ದಾರೆ.

*******

ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ–42 ಸೆಕೆಂಡ್ಸ್

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಖ್ಯಾತ ಹಿಂದೂಸ್ತಾನಿ ಗಾಯಕ ಡಾ. ಮಲ್ಲಿಕಾರ್ಜುನ ಮನ್ಸೂರ ಅವರ ಜನ್ಮದಿನದ ಪ್ರಯುಕ್ತ ಇಂದು ಸಂಜೆ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಸಮಾರಂಭ ಮತ್ತು ಸಂಗೀತೋತ್ಸವ ನಗರದ ಆಲೂರು ವೆಂಕಟರಾವ್ ಸಭಾಭವನದಲ್ಲಿ ನಡೆಯಲಿದೆ. ಟ್ರಸ್ಟ್

ಕೊಡಮಾಡುವ ಪ್ರಸಕ್ತ ಸಾಲಿನ ರಾಷ್ಟ್ರೀಯ ಪ್ರಶಸ್ತಿಗೆ ಖ್ಯಾತ ಹಿಂದೂಸ್ತಾನಿ ಗಾಯಕಿ, ಪುಣೆಯ ವಿದುಷಿ ಅಲಕಾದೇವ ಮಾರುಲ್ಕರ ಮತ್ತು ಯುವ ಪುರಸ್ಕಾರಕ್ಕೆ ಉತ್ತರ ಕನ್ನಡ ಜಿಲ್ಲೆ, ಕನಕನಹಳ್ಳಿಯ ಡಾ.ಹರೀಶ ಹೆಗಡೆ ಹಾಗೂ ಗದಗನ ತಬಲಾವಾದಕ ಡಾ.ನಾಗಲಿಂಗ ಮುರಗಿ ಭಾಜನರಾಗಿದ್ದಾರೆ. ಪ್ರಶಸ್ತಿ ಪ್ರದಾನದ ನಂತರ ಪ್ರಶಸ್ತಿ ಪುರಸ್ಕೃತ ಕಲಾವಿದರ ಸಂಗೀತ ಕಾಯಕ್ರಮ ನಡೆಯಲಿದೆ. ಜತೆಗೆ ಕರ್ನಾಟಕ ವಿಶ್ವವಿದ್ಯಾಲಯದ ಪ್ರಸಾರಾಂಗ ವಿಭಾಗದಲ್ಲಿ ಪಂ.ಮಲ್ಲಿಕಾರ್ಜುನ ಮನ್ಸೂರ ಸ್ಮರಣಾರ್ಥ ಸಂಗೀತಜ್ಞರ ದಿನಾಚರಣೆ ಕಾರ್ಯಕ್ರಮ ಆಯೋಜಿಸಿದೆ. ಕನ್ನಡ ಅಧ್ಯಯನ ಪೀಠದ ಸಭಾಭವನದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಆಕಾಶವಾಣಿ ಕಲಾವಿದ ಸದಾಶಿವ ಐಹೊಳೆ ಅವರು ಹಿಂದೂಸ್ತಾನಿ ಸಂಗೀತ ಪ್ರಸ್ತುತ ಪಡಿಸಲಿದ್ದಾರೆ.

*******

ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರುವ ವೈದ್ಯರು, ಸಿಬ್ಬಂದಿ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮೊಹಮದ್ ಮೊಹಿಸೀನ್ ಸೂಚಿಸಿದ್ದಾರೆ. ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ–ಕ್ರಿಮ್ಸ್‌ಗೆ ಭೇಟಿ ನೀಡಿ, ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆಸ್ಪತ್ರೆಗೆ ಆಗಮಿಸುವ ರೋಗಿಗಳಿಗೆ ಉತ್ತಮ ರೀತಿಯ ಆರೈಕೆ ಮತ್ತು ಚಿಕಿತ್ಸೆ ದೊರೆಯುವಂತೆ ನೋಡಿಕೊಳ್ಳಬೇಕು, ಆಸ್ಪತ್ರೆ ಆವರಣದಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಿ, ವೈದ್ಯಕೀಯ ತ್ಯಾಜ್ಯಗಳನ್ನು ಸಮರ್ಪಕ ರೀತಿಯಲ್ಲಿ ನಿಗಧಿತ ಅವಧಿಯೊಳಗೆ ವಿಲೇವಾರಿ ಮಾಡುವಂತೆ ಸೂಚಿಸಿದರು. ಆಸ್ಪತ್ರೆಯಲ್ಲಿ ಎಲ್ಲಾ ಸೌಲಭ್ಯಗಳಿದ್ದರೂ ಖಾಸಗಿ ಆಸ್ಪತ್ರೆಗಳಿಗೆ ಶಿಫಾರಸ್ಸು ಮಾಡುವುದು ಕಂಡು ಬಂದಲ್ಲಿ ಅಂತಹ ವೈದ್ಯರನ್ನು ಅಮಾನತು ಸೇರಿದಂತೆ ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಮೊಹಮ್ಮದ್ ಮೊಹಿಸಿನ್ ಎಚ್ಚರಿಕೆ ನೀಡಿದರು.

*******

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಿಂದ 2026 ನೇ ಸಾಲಿನ ವಿಶೇ 'ಚೇತನರ ರಿಯಾಯಿತಿ ಬಸ್ ಪಾಸುಗಳ ವಿತರಣೆ, ನವೀಕರಣವನ್ನು ನಿನ್ನೆಯಿಂದ ಆರಂಭಿಸಲಾಗಿದೆ. ಈ ಸಂಬಂಧ ಫಲಾನುಭವಿಗಳು ಸೇವಾಸಿಂಧು ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸುವುದು ಕಡ್ಡಾಯ. 2025 ನೇ ಸಾಲಿನಲ್ಲಿ ವಿತರಿಸಿರುವ ವಿಶೇ 'ಚೇತನರ ಬಸ್ ಪಾಸ್‌ಗಳನ್ನು ಬರುವ ಫೆಬ್ರುವರಿ 28 ರವರೆಗೆ ಮಾನ್ಯ ಮಾಡಲಾಗುವುದು ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

*******

2025 ರಲ್ಲಿ ನಡೆದ ಪ್ರಮುಖ ಘಟನಾವಳಿಗಳ ಕುರಿತ ವಿಶೇ..ಷ ಕಾರ್ಯಕ್ರಮ 'ಕಾಲಚಕ್ರ' ಇಂದು ಆಕಾಶವಾಣಿಯಲ್ಲಿ ಪ್ರಸಾರವಾಗಲಿದೆ. ಬೆಂಗಳೂರು ಆಕಾಶವಾಣಿಯ ಪ್ರಾದೇಶಿಕ ಸುದ್ದಿ ವಿಭಾಗ ಸಿದ್ಧಪಡಿಸಿರುವ 45 ನಿಮಿಷಗಳ ಈ ಕಾರ್ಯಕ್ರಮ ಇಂದು ರಾತ್ರಿ 9 ಗಂಟೆ 15 ನಿಮಿಷದಿಂದ 10 ಗಂಟೆಯವರೆಗೆ ಪ್ರಸಾರವಾಗಲಿದೆ. ಆಕಾಶವಾಣಿಯ ಪ್ರಾದೇಶಿಕ ಸುದ್ದಿ ವಿಭಾಗ ಇಂದು ಸಂಜೆ 5.30 ಕ್ಕೆ ರಾಜ್ಯ ಸರ್ಕಾರದ ಇ–ಸ್ವತ್ತು ಯೋಜನೆ ಕುರಿತ ಕಾರ್ಯಕ್ರಮ ಪ್ರಸಾರ ಮಾಡಲಿದೆ. ಈ ಎರಡೂ ಕಾರ್ಯಕ್ರಮಗಳು ರಾಜ್ಯದ ಎಲ್ಲಾ ಬಾನುಲಿ ಕೇಂದ್ರಗಳಿಂದ ಏಕಕಾಲದಲ್ಲಿ ಮೂಡಿಬರಲಿವೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಹೊಸ ವರ್ಷದ ಸಂಭ್ರಮಾಚರಣೆ ಸಂದರ್ಭದಲ್ಲಿ ಸುರಕ್ಷತೆ ಸರ್ಕಾರದ ಆದ್ಯತೆ: ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆಯಿಂದ ಅಗತ್ಯ ಸಿದ್ಧತೆ.

ಶಿಶುಗಳ ಅಪೌಷ್ಟಿಕತೆ ತಡೆಯಲು ರಾಜ್ಯದ ಪ್ರತಿ ಜಿಲ್ಲಾಸ್ಪತ್ರೆಗಳಲ್ಲಿ 'ತಾಯಿ ಎದೆ ಹಾಲಿನ ಬ್ಯಾಂಕ್' ಸ್ಥಾಪನೆ–ಆರೋಗ್ಯ ಸಚಿವರಿಂದ ಮಾಹಿತಿ.

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ, ರಾಜ್ಯದಲ್ಲಿ ಹೆಸರುಕಾಳು ಖರೀದಿ ಅವಧಿ ವಿಸ್ತರಿಸಿದ ಕೇಂದ್ರ ಸರ್ಕಾರ.

ಪಂ.ಮಲ್ಲಿಕಾರ್ಜುನ ಮನ್ಸೂರ ರಾಷ್ಟ್ರೀಯ ಪ್ರಶಸ್ತಿಗೆ ಪುಣೆಯ ವಿದುಷಿ ಅಲಕಾದೇವ ಮಾರುಲ್ಕರ ಭಾಜನ: ಇಂದು ಸಂಜೆ ಪ್ರಶಸ್ತಿ ಪ್ರದಾನ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********